ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ : ತಾಂ.ಶಿ.ಇ 03 ಸಿಡಿಸಿ(1) 2019-20

ಆಯುಕ್ತರ ಕಛೇರಿ
ತಾಂತ್ರಿಕ ಶಿಕ್ಷಣ ಭವನ
ಅರಮನೆ ರಸ್ತೆ, ಬೆಂಗಳೂರು-೫೬೦೦೦೧.
ದಿನಾಂಕ: 14/06/2022

**-: ಜ್ಞಾಪನ :-**

ವಿಷಯ : ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸಮಗ್ರ ಕಲಿಕಾ ನಿರ್ವಹಣಾ ವ್ಯವಸ್ಥೆ (LMS) ಯ ಪರಿಣಾಮಕಾರಿ ಅನುಷ್ಠಾನದ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ "ಕರ್ನಾಟಕ ಕಲಿಕಾ ನಿರ್ವಹಣಾ ವ್ಯವಸ್ಥೆ (LMS)" ಈಗಾಗಲೇ ಅನುಷ್ಠಾನಗೊಂಡಿರುತ್ತದೆ. ಸದರಿ LMS ಸದುಪಯೋಗವನ್ನು ಪ್ರತಿ ವಿದ್ಯಾರ್ಥಿ ಹಾಗೂ ಬೋಧಕ ಸಿಬ್ಬಂದಿಯವರು ಪಡೆಯಬೇಕಾಗಿರುವುದು ಕಡ್ಡಾಯವಾಗಿರುತ್ತದೆ. ಆದಾಗ್ಯೂ ವಿದ್ಯಾರ್ಥಿಗಳು ಹಾಗೂ ಬೋಧಕ ವರ್ಗದವರು LMS ಪೋರ್ಟಲ್ ಉಪಯೋಗವನ್ನು ಪರಿಣಾಮಕಾರಿಯಾಗಿ ಉಪಯೋಗಿಸದಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ ಪ್ರತಿ ಸಂಸ್ಥೆಗಳ ಪ್ರಾಚಾರ್ಯರು ತಮ್ಮ ಸಂಸ್ಥೆಯ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಕರ್ನಾಟಕ ಕಲಿಕಾ ನಿರ್ವಹಣಾ ವ್ಯವಸ್ಥೆ (LMS)ಯ ಬಗ್ಗೆ ಸಂಸ್ಥೆಯ ಮಟ್ಟದಲ್ಲಿ ಅರಿವು ಮೂಡಿಸುವ ಮತ್ತು ಬೋಧಕರು ಕಡ್ಡಾಯವಾಗಿ ದೈನಂದಿನ ಶೈಕ್ಷಣಿಕ ಕಾರ್ಯಗಳಿಗೆ LMS ಪೋರ್ಟಲ್ ಉಪಯೋಗಿಸುವ ವಿಧಾನಗಳ ಬಗ್ಗೆ LMS Coordinator ಮುಖಾಂತರ ಅರಿವು ಕಾರ್ಯಕ್ರಮವನ್ನು ಏರ್ಪಡಿಸಲು ತಿಳಿಸಿದೆ.

ಪ್ರಾಚಾರ್ಯರು ತಮ್ಮ ಸಂಸ್ಥೆಯ ಬೋಧಕರು ಮತ್ತು ವಿದ್ಯಾರ್ಥಿಗಳು ಕರ್ನಾಟಕ ಕಲಿಕಾ ನಿರ್ವಹಣಾ ವ್ಯವಸ್ಥೆ (LMS)ಯನ್ನು ಉಪಯೋಗಿಸಿರುವ ಹಾಗೂ login ಆಗಿ ದೈನಂದಿನ ಶೈಕ್ಷಣಿಕ ಕಾರ್ಯಗಳನ್ನು LMS ಪೋರ್ಟಲ್ ನಲ್ಲಿ ದಾಖಲಿಸಿರುವ ಬಗ್ಗೆ, ಶೇಕಡಾವಾರು ಬಳಕೆ ವಿವರಗಳನ್ನು ಸಂಸ್ಥೆಯ LMS Coordinator ಗಳಿಂದ ದಿನಂಪ್ರತಿ ಮಾಹಿತಿ ಪಡೆದು, ಕರ್ನಾಟಕ ಕಲಿಕಾ ನಿರ್ವಹಣಾ ವ್ಯವಸ್ಥೆ (LMS)ಯ ಪೂರ್ಣ ಪ್ರಮಾಣದ ಬಳಕೆಯನ್ನು ಖಾತರಿ ಪಡಿಸಿಕೊಳ್ಳಲು ಸೂಚಿಸಿದೆ.

ಜಂಟಿ ನಿರ್ದೇಶಕರು -ಸಿಡಿಸಿ
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ: ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರಿಗೆ:-ಸೂಕ್ತ ಕ್ರಮಕ್ಕಾಗಿ.

ಪ್ರತಿ :

1) ಮಾನ್ಯ ಆಯುಕ್ತರ ಆಪ್ತ ಶಾಖೆ : ಮಾಹಿತಿಗಾಗಿ
2) ಮಾನ್ಯ ನಿರ್ದೇಶಕರ ಆಪ್ತ ಶಾಖೆ : ಮಾಹಿತಿಗಾಗಿ
3) ಇ – ಆಡಳಿತ ವಿಭಾಗಕ್ಕೆ – ವೆಬ್ ಸೈಟ್ ನಲ್ಲಿ ಪ್ರಕಟಿಸಲು.